ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉನಿ : ಸುಮಪ : 2018–19 :** **ದಿನಾಂಕ : 15–10–2018**

# ಪತ್ರಿಕಾ ಪ್ರಕಟಣೆ

1. Press Conference:

   Saurabh Bhai Patel,
   Minister (Energy) Govt. of Gujarat

   Date: 16-10-2018, Tuesday, Time : 10.30 AM
   Place: Conference Hall, Hotel Capital, Rajbhavan Road, Bengaluru.
   Contact: Mr. Sugoor-9978440817, Mr. Bihola-9978405818

2. WORLD FOOD DAY – 2018:

   Inauguration by:
   B.Y. Srinivas,
   Director of Agriculture, Govt. of Karnataka

   Presided by:
   Dr. M. Mallappa, President, IAT.

   Date : 16-10-2018, Tuesday, Time : 11.00 AM
   Place: Dr. H.R. Arakeri Auditorium, IAT, # 15, Queens Road, Bengaluru – 560 052.

3. ಬೆಂಗಳೂರು ಪುಸ್ತಕೋತ್ಸವ
ಪುಸ್ತಕ ಸಂಸ್ಕೃತಿ – ಒಂದು ಸಂವಾದ:

ಮುಖ್ಯ ಅತಿಥಿಗಳು:
ಡಾ. ಕೆ. ವೈ. ನಾರಾಯಣಸ್ವಾಮಿ
ಎಸ್.ಆರ್. ವಿಜಯಶಂಕರ

ಅಧ್ಯಕ್ಷತೆ:
ಡಾ. ವಸುಂಧರಾ ಭೂಪತಿ, ಅಧ್ಯಕ್ಷರು, ಕನ್ನಡ ಪುಸ್ತಕ ಪ್ರಾಧಿಕಾರ.

ದಿನಾಂಕ: 16–10–2018, ಮಂಗಳವಾರ, ಸಮಯ: ಸಂಜೆ 5.00 ಗಂಟೆಗೆ.
ಸ್ಥಳ: ತ್ರಿಪುರವಾಸಿನಿ, ಅರಮನೆ ಮೈದಾನ, ಬೆಂಗಳೂರು ಪುಸ್ತಕೋತ್ಸವದ ಸಾಂಸ್ಕೃತಿಕ ವೇದಿಕೆ. ಬೆಂಗಳೂರು.

# ಪತ್ರಿಕಾ ಪ್ರಕಟಣೆ

**ಸಂಖ್ಯೆ:1152/1252**

## ರೈತರಿಗೊಂದು ವಿನೂತನ ಆ್ಯಪ್ ಬಿಡುಗಡೆ

ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)

ರೈತರು ತಮ್ಮ ಬೆಳೆಗಳಿಗೆ ತಗಲುವ ರೋಗ, ಕೀಟಬಾಧೆ ಅಥವಾ ಪೋಷಕಾಂಶಗಳ ಕೊರತೆಯ ಲಕ್ಷಣಗಳುಳ್ಳ ಸಸ್ಯಗಳ ಛಾಯಾಚಿತ್ರವನ್ನು ಮೊಬೈಲ್ ಮೂಲಕ ತೆಗೆದು ಪ್ಲಾಂಟಿಕ್ಸ್ ಎನ್ನುವ ಆ್ಯಪ್‌ನಲ್ಲಿ ಅಪ್‌ಲೋಡ್ ಮಾಡಿದರೆ ಸಮಸ್ಯೆಯನ್ನು ಗುರುತಿಸಿ ಪರಿಹಾರ ಕ್ರಮಗಳನ್ನು ಸೂಚಿಸುವ ನೂತನ ಆ್ಯಪ್‌ನ್ನು ಕೃಷಿ ಸಚಿವ ಶಿವಶಂಕರ ರೆಡ್ಡಿ ಅವರು ಇಂದು ಬಿಡುಗಡೆ ಮಾಡಿದರು.

ವಿಕಾಸಸೌಧದ ಸಚಿವರ ಕೊಠಡಿಯಲ್ಲಿ ಹಮ್ಮಿಕೊಂಡಿದ್ದ ಸರಳ ಸಮಾರಂಭದಲ್ಲಿ ಜರ್ಮನಿ ಮೂಲದ ಪೀಟ್ ಎನ್ನುವ ಸ್ಮಾರ್ಟ್ ಫೋನ್ ಆ್ಯಂಡ್ರಾಯಿಡ್ ಅಪ್ಲಿಕೇಶನ್

ಕಂಪೆನಿಯು ಪ್ಲಾಂಟಿಕ್ಸ್ ಎನ್ನುವ ನೂತನ ರೈತಸ್ನೇಹಿ ಆ್ಯಪ್‌ನ್ನು ಅಭಿವೃದ್ಧಿಪಡಿಸಿದ್ದು ರೈತರಿಗೆ ಅತ್ಯಂತ ಸಹಕಾರಿಯಾದ ಆ್ಯಪ್ ಆಗಿದೆ ಎಂದು ಸಚಿವರು ತಿಳಿಸಿದರು.

ಈ ಆ್ಯಪ್‌ನ್ನು ರೈತರು ಗೂಗಲ್ ಸ್ಟೋರ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದ್ದು ಇಲ್ಲಿಯವರೆಗೆ ಪ್ರತಿ ತಿಂಗಳಿಗೆ 6 ಲಕ್ಷಕ್ಕಿಂತ ಹೆಚ್ಚಿನ ರೈತರು ವಿವಿಧ ಭಾಷೆಗಳಲ್ಲಿ ಡೌನ್‌ಲೋಡ್ ಮಾಡಿಕೊಂಡಿರುತ್ತಾರೆ. ರೈತರು ಅಪ್‌ಲೋಡ್ ಮಾಡುವ ಚಿತ್ರಗಳನ್ನು ಯಾವ ಪ್ರದೇಶದಿಂದ ಹಾಗೂ ಯಾವಾಗ ಅಪ್‌ಲೋಡ್ ಮಾಡಲಾಗಿದೆ ಎಂಬುದನ್ನು ಆಧರಿಸಿ ಅದರ ಮರುಕ್ಷಣವೇ ರೈತರಿಗೆ ಸೂಕ್ತಕ್ರಮಗಳನ್ನು ಈ ಆ್ಯಪ್ ಸೂಚಿಸುತ್ತದೆ.

ಸಸ್ಯಗಳ ಆರೋಗ್ಯ ತಪಾಸಣೆ, ರೈತರ, ವಿಜ್ಞಾನಿಗಳ ಹಾಗೂ ಆಸಕ್ತರ ಒಂದೇ ವೇದಿಕೆಯಾಗಿ ಈ ಆ್ಯಪ್ ಕಾರ್ಯನಿರ್ವಹಿಸುವುದು ಮತ್ತು ಇದೊಂದು ಸಸ್ಯ ಪೀಡೆಗಳ ಲೈಬ್ರೆರಿಯಂತೆ ಕಾರ್ಯನಿರ್ವಹಿಸುತ್ತದೆ. ಯಾವುದೇ ಪ್ರದೇಶದಲ್ಲಿ ಈ ಆ್ಯಪ್ ಮೂಲಕ ಅಲ್ಲಿನ ಹವಾಮಾನ, ತಪಾಮಾನ, ಮಳೆ ಕುರಿತಂತೆ ಮುನ್ಸೂಚನೆಗಳನ್ನು ಸಹ ಪಡೆಯಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಇಕ್ರಿಸ್ಯಾಟ್ ಸಂಸ್ಥೆಯ ಡಿಜಿಟಲ್ ಅಗ್ರಿಕಲ್ಚರ್ ವಿಭಾಗದ ವಿಜ್ಞಾನಿ ಡಾ. ಶ್ರೀಕಾಂತ ರೂಪಾವತರಾಮ್ r.srikanth@cgiar.org. ಹಾಗೂ ಜರ್ಮನಿಯ ಪೀಟ್ ಸಂಸ್ಥೆಯ ಬಿಯಾಂಕಾ bianca@peat.ai ಇಮೇಲ್ ಮೂಲಕ ಸಂಪರ್ಕಿಸಬಹುದಾಗಿದೆ.

**ಸಂಖ್ಯೆ:1153/1253**

## ಫೀಬಾ ಏಷ್ಯಾ ಮಹಿಳಾ ಬ್ಯಾಸ್ಕೆಟ್ ಬಾಲ್ ಪಂದ್ಯಾವಳಿಗಳಿಗೆ ಸಕಲ ಸಿದ್ಧತೆ : ಡಾ. ಜಿ. ಪರಮೇಶ್ವರ್

ಬೆಂಗಳೂರು, ಅಕ್ಟೋಬರ್ 15 (ಕರ್ನಾಟಕ ವಾರ್ತೆ) :

ನಗರದ ಕಂಠೀರವ ಕ್ರೀಡಾಂಗಣ ಹಾಗೂ ಕೋರಮಂಗಲದ ಒಳಾಂಗಣ ಕ್ರೀಡಾಂಗಣದಲ್ಲಿ ಅಕ್ಟೋಬರ್ 28 ರಿಂದ ನವೆಂಬರ್ 3 ರವರೆಗೆ ನಡೆಯಲಿರುವ ಫೀಬಾ ಏಷ್ಯಾ 18 ವರ್ಷ ವಯೋಮಾನದೊಳಗಿನ ಮಹಿಳಾ ಬ್ಯಾಸ್ಕೆಟ್ ಬಾಲ್ ಪಂದ್ಯಾವಳಿ ಸಕಲ ಸಿದ್ಧತೆ

ಮಾಡಲಾಗಿದೆ ಎಂದು ಗೃಹ, ಬೆಂಗಳೂರು ನಗರಾಭಿವೃದ್ಧಿ ಮತ್ತು ಯುವ ಸಬಲೀಕರಣ ಮತ್ತು ಕ್ರೀಡಾ ಖಾತೆಗಳನ್ನು ಹೊತ್ತ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಅವರು ಇಲ್ಲಿ ಇಂದು ಪ್ರಕಟಿಸಿದರು.

ವಿಧಾನಸೌಧದ ತಮ್ಮ ಕಚೇರಿಯಲ್ಲಿ ಅಧಿಕಾರಿಗಳೊಂದಿಗೆ ಈ ಪಂದ್ಯಾವಳಿ ಕುರಿತಂತೆ ಪೂರ್ವಭಾವಿ ಸಭೆ ನಡೆಸಿದ ಬಳಿಕ ಮಾಧ್ಯಮದವರೊಂದಿಗೆ ಅವರು ಮಾತನಾಡುತ್ತಿದ್ದರು.

ರಾಜ್ಯಪಾಲ ವಜು ಭಾಯಿ ರುಢಾ ಭಾಯಿ ವಾಲ ಅವರು ಅಕ್ಟೋಬರ್ 27 ರಂದು ಹೋಟೆಲ್ ಛಾನ್ಸರಿ ಪೆವಿಲಿಯನ್‌ನಲ್ಲಿ ಈ ಪಂದ್ಯಾವಳಿಯ ಉದ್ಘಾಟನೆ ನೆರವೇರಿಸಲಿದ್ದಾರೆ. ಸತತ ಮೂರನೇ ಬಾರಿಗೆ ಬೆಂಗಳೂರಿನಲ್ಲಿ ಫೀಬಾ ಏಷಿಯಾ ಅಂಡರ್ 18 ಮಹಿಳಾ ಬ್ಯಾಸ್ಕೆಟ್ ಬಾಲ್ ಪಂದ್ಯಾವಳಿಗಳು ನಡೆಯುತ್ತಿವೆ. ಆಸ್ಟ್ರೇಲಿಯಾ, ಚೀನಾ, ಇಂಡೋನೇಷ್ಯಾ, ಜಪಾನ್, ಮಲೇಷಿಯಾ ಹಾಗೂ ನ್ಯೂಜೀಲ್ಯಾಂಡ್ ಸೇರಿದಂತೆ ಒಟ್ಟು 16 ರಾಷ್ಟ್ರಗಳ 320 ಕ್ರೀಡಾಪಟುಗಳು ಈ ಪಂದ್ಯಾವಳಿಗಳಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಎಲ್ಲಾ ಕ್ರೀಡಾ ಪಟುಗಳಿಗೂ ಊಟ – ವಸತಿ, ಸಾರಿಗೆ ಮತ್ತು ಆರೋಗ್ಯ ಸೌಲಭ್ಯ ಸೇರಿದಂತೆ ಎಲ್ಲಾ ಅಗತ್ಯ ಸೌಕರ್ಯಗಳನ್ನು ಕಲ್ಪಿಸುವ ವ್ಯವಸ್ಥೆ ಮಾಡಲಾಗಿದೆ ಎಂದರು.

ಈ ಪಂದ್ಯಾವಳಿಗಳು ನಡೆಯುವ ಕ್ರೀಡಾಂಗಣವನ್ನು ಎರಡು ಕೋಟಿ ರೂ. ವೆಚ್ಚದಲ್ಲಿ ಅಂತಾರಾಷ್ಟ್ರೀಯ ಮಟ್ಟಕ್ಕೆ ಮೇಲ್ದರ್ಜೆಗೇರಿಸಲಾಗಿದೆ. ಪಂದ್ಯಾವಳಿಗಳನ್ನು ವೀಕ್ಷಿಸಲು ಯಾವುದೇ ಪ್ರವೇಶ ಶುಲ್ಕ ಇಲ್ಲದಿರುವುದೇ ಈ ಬಾರಿಯ ವಿಶೇಷವಾಗಿದೆ ಎಂದು ಡಾ ಪರಮೇಶ್ವರ್ ಅವರು ತಿಳಿಸಿದರು.

**ಸಂಖ್ಯೆ:1154/1254**

**ಕನ್ನಡ ಬಾರದ ಸರ್ಕಾರಿ ನೌಕರರಿಗೆ ಮತ್ತು ಸಾರ್ವಜನಿಕರಿಗಾಗಿ**

## ಅಂಚೆ ಮೂಲಕ ಕನ್ನಡ ಶಿಕ್ಷಣಕ್ಕೆ ಅರ್ಜಿ ಆಹ್ವಾನ

ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಮತ್ತು ಮೈಸೂರಿನ ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆ ಜಂಟಿಯಾಗಿ ಕನ್ನಡ ಬಾರದ ಸರ್ಕಾರಿ ನೌಕರರು ಹಾಗೂ ಸಾರ್ವಜನಿಕರಿಂದ ಹನ್ನೆರಡು ತಿಂಗಳುಗಳ ಅಂಚೆ ಮೂಲಕ ಕನ್ನಡ ಶಿಕ್ಷಣಕ್ಕಾಗಿ ಅರ್ಜಿ ಆಹ್ವಾನಿಸಿದೆ.

ಕರ್ನಾಟಕ ಸರ್ಕಾರಿ ನೌಕರರು ಸಂಪರ್ಕ ಶಿಬಿರ ಹಾಗೂ ಪರೀಕ್ಷೆಗಳಿಗೆ ಹಾಜರಾಗುವಾಗಿನ ಅವರ ಕಚೇರಿ ಗೈರು ಹಾಜರಿಯನ್ನು ಅನ್ಯ ಕಾರ್ಯ ನಿಮಿತ್ತ ಎಂದು ಪರಿಗಣಿಸಲಾಗುವುದು. ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಗೆ ನೋಂದಯಿಸಿಕೊಂಡು ಉತ್ತೀರ್ಣರಾದವರಿಗೆ ಕರ್ನಾಟಕ ಲೋಕಸೇವಾ ಆಯೋಗದ ಕನ್ನಡ ಪರೀಕ್ಷೆಯಿಂದ ವಿನಾಯಿತಿಯಿದೆ.

ಈ ಯೋಜನೆಯನ್ನು ಈಗ ಸಾರ್ವಜನಿಕರಿಗೂ ಸಹ ವಿಸ್ತರಿಸಲಾಗಿದೆ. ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರುಬೇಕು ಹಾಗೂ ವಯೋಮಿತಿ 18 ರಿಂದ 50 ವಯಸ್ಸಿನ ಒಳಗಿರಬೇಕು. ಆಸಕ್ತರು ಭರ್ತಿಮಾಡಿದ ಅರ್ಜಿಯ ಜೊತೆಯಲ್ಲಿ ರೂ. 250/– ಡಿಮ್ಯಾಂಡ್ ಡ್ರಾಫ್ಟ್‌ನ್ನು ಕಳುಹಿಸಿ ಕೊಡಬೇಕು. ನೋಂದಯಿತರಿಗೆ ಇಪ್ಪತ್ತು ಪಾಠಾವಳಿಗಳನ್ನು ಕಳುಹಿಸಿಕೊಡಲಾಗುವುದು. ತರಬೇತಿ ಮತ್ತು ಸಂಪರ್ಕ ಶಿಬಿರದ ಅಂತ್ಯದಲ್ಲಿ ಪರೀಕ್ಷೆಗಳನ್ನು ನಡೆಸಲಾಗುವುದು.

33ನೇ ತಂಡದ ತರಬೇತಿಯು ನವೆಂಬರ 01 ರಿಂದ ಆರಂಭವಾಗುತ್ತದೆ. ಅರ್ಜಿ ನಮೂನೆ ಮತ್ತು ತರೇತಿ ವಿವರಗಳನ್ನು ಪ್ರಭಾರಿ ಅಧಿಕಾರಿ, ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆ, ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆ, ಮಾನಸಗಂಗೋತ್ರಿ, ಮೈಸೂರು – 570 006 ದೂ.ಸಂ. 0821–2345128 ಇವರಿಗೆ ಐದು ರೂಪಾಯಿಯ ಅಂಚೆ ಚೀಟಿಯನ್ನು ಹಚ್ಚಿದ ಸ್ವವಿಳಾಸಿತ ಲಕೋಟೆಯನ್ನು ಕಳುಹಿಸಿ ಪಡೆದುಕೊಳ್ಳಬಹುದು. ಭರ್ತಿಮಾಡಿದ ಅರ್ಜಿಗಳು ಪ್ರಭಾರಿ ಅಧಿಕಾರಿಯವರಿಗೆ ಅಕ್ಟೋಬರ್ 31 ಒಳಗೆ ತಲುಪಬೇಕು ಎಂದು ಪ್ರಕಟಣೆ ತಿಳಿಸಿದೆ.

ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ ಮತ್ತು ಮೈಸೂರಿನ ಭಾರತೀಯ ಭಾಷೆಗಳ ಕೇಂದ್ರ ಸಂಸ್ಥೆ ಜಂಟಿಯಾಗಿ ನವೆಂಬರ್ 01, 1985 ರಿಂದ ಕರ್ನಾಟಕದಲ್ಲಿರುವ ಕನ್ನಡ ಬಾರದ ಎಲ್ಲಾ ಸರ್ಕಾರಿ ನೌಕರಿಗಾಗಿ ಹನ್ನೆರಡು ತಿಂಗಳುಗಳ ಅಂಚೆ ಮೂಲಕ ಕನ್ನಡ ಶಿಕ್ಷಣ ಯೋಜನೆಯೊಂದನ್ನು ನಡೆಸುತ್ತಿವೆ. ಇದಕ್ಕೆ ಕರ್ನಾಟಕದಲ್ಲಿರುವ ಎಲ್ಲಾ ನಗರಸಭೆ, ಕ.ವಿ.ಪ್ರ.ನಿ.ನಿ., ಕೆ.ಎಸ್.ಆರ್.ಟಿ.ಸಿ., ವಿಶ್ವವಿದ್ಯಾಲಯಗಳು, ಶಾಲಾ ಕಾಲೇಜುಗಳು ಮತ್ತಿತರ ಸರ್ಕಾರಿ ಅನುದಾನ ಪಡೆಯುವ ಸಂಸ್ಥೆಗಳ ನೌಕರರು ಮತ್ತು ಎಲ್ಲಾ ರಾಷ್ಟ್ರೀಕೃತ ಬ್ಯಾಂಕುಗಳ ನೌಕರರು ಸಹ ನೊಂದಾಯಿಸಿಕೊಳ್ಳಬಹುದು. ನೊಂದಣಿತರು ಶುಲ್ಕವನ್ನು ಕೊಡಬೇಕಾಗಿಲ್ಲ.

**ಸಂಖ್ಯೆ:1155/1255**

# ನವೆಂಬರ್ 1 ರಂದು

## ರಾಜ್ಯಮಟ್ಟದ ಕರ್ನಾಟಕ ರಾಜ್ಯೋತ್ಸವ

ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)

ಸಾರ್ವಜನಿಕ ಶಿಕ್ಷಣ ಇಲಾಖಾ ವತಿಯಿಂದ ಪ್ರತಿ ವರ್ಷದಂತೆ ಈ ವರ್ಷವೂ ಸಹ ನವೆಂಬರ್ 1 ರಂದು ಬೆಳಿಗ್ಗೆ 9–00 ಗಂಟೆಗೆ ಕರ್ನಾಟಕ ರಾಜ್ಯೋತ್ಸವ ಸಮಾರಂಭವನ್ನು ನಗರದ ಶ್ರೀ ಕಂಠೀರವ ಕ್ರೀಡಾಂಗಣದಲ್ಲಿ ಆಚರಿಸಲಾಗುತ್ತಿದೆ.

ಈ ಸಂದರ್ಭದಲ್ಲಿ ಸುಮಾರು 12,000 ಶಾಲಾ ಮಕ್ಕಳಿಂದ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.

ಈ ಕಾರ್ಯಕ್ರಮದ ಉದ್ಘಾಟನೆಯನ್ನು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿ ಅವರು ನೆರವೇರಿಸಲಿದ್ದಾರೆ. ಸಮಾರಂಭದಲ್ಲಿ ಉಪ ಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ, ಶಿಕ್ಷಣ ಸಚಿವ ಜಿ. ಟಿ. ದೇವೇಗೌಡ ಅವರು ಸೇರಿದಂತೆ ಅನೇಕ ಗಣ್ಯವ್ಯಕ್ತಿಗಳು ಪಾಲ್ಗೊಳ್ಳಲಿದ್ದಾರೆ.

**ಸಂಖ್ಯೆ:1156/1256**

## ಬೆಂಗಳೂರು ಪುಸ್ತಕೋತ್ಸವ –2018

ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)

ಕನ್ನಡ ಪುಸ್ತಕ ಪ್ರಾಧಿಕಾರವು ಬೆಂಗಳೂರು ಪುಸ್ತಕೋತ್ಸವ ಪುಸ್ತಕ ಸಂಸ್ಕೃತಿ– ಒಂದು ಸಂವಾದ ಕಾರ್ಯಕ್ರಮವನ್ನು ಅಕ್ಟೋಬರ್ 16 ರಂದು ಹಮ್ಮಿಕೊಂಡಿದೆ.

ನಗರದ ಅರಮನೆ ಮೈದಾನನ ತ್ರಿಪುರ ವಾಸಿನಿಯಲ್ಲಿ ಸಂಜೆ 5.00 ಗಂಟೆಗೆ ಸಂವಾದವನ್ನು ಏರ್ಪಡಿಸಲಾಗಿದೆ. ಸಮಾರಂಭದ ಅಧ್ಯಕ್ಷತೆಯನ್ನು ಕನ್ನಡ ಪುಸ್ತಕ ಪ್ರಾಧಿಕಾರ ಅಧ್ಯಕ್ಷ ಡಾ. ವಸುಂಧರಾ ಭೂಪತಿ ಅವರು ವಹಿಸಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

_ಸಂಖ್ಯೆ:1157/1257

# “ಮನೆಯಂಗಳದಲ್ಲಿ ಮಾತುಕತೆ” ಕಾರ್ಯಕ್ರಮ

## ತಿಂಗಳ ಅತಿಥಿಯಾಗಿ ಕ್ಯಾನ್ಸರ್ ತಜ್ಞೆ ಡಾ. ವಿಜಯಲಕ್ಷ್ಮಿ ದೇಶಮಾನೆ

ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)

ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಈ ತಿಂಗಳ “ಮನೆಯಂಗಳದಲ್ಲಿ ಮಾತುಕತೆ” ಕಾರ್ಯಕ್ರಮದಲ್ಲಿ ಕ್ಯಾನ್ಸರ್ ತಜ್ಞೆ ಡಾ. ವಿಜಯಲಕ್ಷ್ಮಿ ದೇಶಮಾನೆ ಅವರು ತಿಂಗಳ ಅತಿಥಿಯಾಗಿ ಪಾಲ್ಗೊಳ್ಳಲಿದ್ದಾರೆ.

ಅಕ್ಟೋಬರ್ 20 ರಂದು ಸಂಜೆ 4.00 ಗಂಟೆಗೆ **ಕನ್ನಡ ಭವನದ ನಯನ ಸಭಾಂಗಣದಲ್ಲಿ ಕಾರ್ಯಕ್ರಮವನ್ನು** ಹಮ್ಮಿಕೊಳ್ಳಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ:1157/1257

# ಸಚಿವರ ಪ್ರವಾಸ

**ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)**

ಕೃಷಿ ಸಚಿವ ಎನ್.ಹೆಚ್. ಶಿವಶಂಕರರೆಡ್ಡಿ ಅವರು ಅಕ್ಟೋಬರ್ 16 ರಂದು ಚಿತ್ರದುರ್ಗ ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ರಾತ್ರಿ ಬೆಂಗಳೂರಿಗೆ ಹಿಂತಿರುಗುವರು ಎಂದು ಪ್ರಕಟಣೆ ತಿಳಿಸಿದೆ.

ಸಂಖ್ಯೆ:1158/1258

# ಅವಧಿ ವಿಸ್ತರಣೆ

**ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)**

ಮಾರ್ಚ್/ಏಪ್ರಿಲ್-2019ರ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಹಾಜರಾಗುವ ಅರ್ಹ ಶಾಲಾ ವಿದ್ಯಾರ್ಥಿಗಳ (CCERF), ಖಾಸಗಿ ಅಭ್ಯರ್ಥಿಗಳ (CCEPF) ಮತ್ತು ಪುನರಾವರ್ತಿತ ಅಭ್ಯರ್ಥಿಗಳ (CCERR, CCEPR, NSR ಮತ್ತು NSPR)ವಿವರಗಳನ್ನು ಅನ್‌ಲೈನ್(SATS)ಮೂಲಕ ಅಪ್‌ಲೋಡ್ ಮಾಡಲು ಮತ್ತು ಖಾಸಗಿ ಅಭ್ಯರ್ಥಿಗಳ ನೊಂದಣಿ ಮಾಡಲು ದಿನಾಂಕಗಳನ್ನು ವಿಸ್ತರಿಸಲಾಗಿದೆ.

2019ರ ಮಾರ್ಚ್/ಏಪ್ರಿಲ್ ಎಸ್‌ಎಸ್‌ಎಲ್‌ಸಿ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳನ್ನು ಜಿಲ್ಲಾಉಪನಿರ್ದೇಶಕರಕಛೇರಿಯಲ್ಲಿ ನೋಂದಣಿ ಮಾಡಿಕೊಳ್ಳಲು ಹಾಗೂ ಶಾಲಾ ಸಂಕೇತ ಪಡೆಯಲುನಿಗದಿಪಡಿಸಿದ ಕೊನೆಯ ದಿನಾಂಕ: 29.10.2018

SATSಮೂಲಕ CCERF,CCEPF, CCERR , CCEPR, NSR ಮತ್ತು NSPR ವಿದ್ಯಾರ್ಥಿಗಳ ಮಾಹಿತಿಯನ್ನು ಅಪ್‌ಲೋಡ್ ಮಾಡಲು ನಿಗದಿಪಡಿಸಿದ ಕೊನೆಯ ದಿನಾಂಕ: 31.10.2018

SATS ಮೂಲಕ CCERF,CCEPF, CCERR , CCEPR, NSR ಮತ್ತು NSPR ವಿದ್ಯಾರ್ಥಿಗಳ ಪರೀಕ್ಷಾ ಶುಲ್ಕದ ಚಲನ್ ಮುದ್ರಿಸಿಕೊಂಡು ನೆಫ್ಟ್ ಮೂಲಕ ಬ್ಯಾಂಕ್‌ಗೆ ಜಮೆ ಮಾಡಲು ನಿಗಧಿಪಡಿಸಿದ ದಿನಾಂಕ 01.11.2018 ರಿಂದ 16.11.2018

2002 ಮತ್ತು ಹಿಂದಿನ ವರ್ಷಗಳ ಪರೀಕ್ಷೆಯಲ್ಲಿ ಅನುತ್ತೀರ್ಣರಾದ ಪುನರಾವರ್ತಿತ ಅಭ್ಯರ್ಥಿಗಳ (NSR & NSPR) ಎಂಎಸ್‌ಎ, ನಾಮಿನಲ್‌ರೋಲ್ ಮತ್ತು ಸಂಬಂಧಿಸಿದ ದಾಖಲೆಗಳನ್ನು ಮಂಡಳಿಗೆ ಸಲ್ಲಿಸಲು ಕೊನೆಯ ದಿನಾಂಕ 20.11.2018.

**ಸಂಖ್ಯೆ:1159/1259**

## ಕಾರಂಜಾ ನೀರಾವರಿ ಯೋಜನೆ ಮುಳುಗಡೆ ಸಂತ್ರಸ್ಥರಿಗೆ ಪರಿಹಾರಕ್ಕೆ ಸೂಕ್ತ ಕ್ರಮ- ಮುಖ್ಯಮಂತ್ರಿ ಹೆಚ್. ಡಿ. ಕುಮಾರಸ್ವಾಮಿ

ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)

ಬೀದರ್ ಜಿಲ್ಲೆಯ ಕಾರಂಜಾ ನೀರಾವರಿ ಯೋಜನೆಯಲ್ಲಿ ಮುಳುಗಡೆ ಸಂತ್ರಸ್ಥರಿಗೆ ಸಮರ್ಪಕವಾದ ಪರಿಹಾರ ನೀಡುವ ನಿಟ್ಟಿನಲ್ಲಿ ರಾಜ್ಯ ಸಮ್ಮಿಶ್ರ ಸರ್ಕಾರ ಕಾರ್ಯೋನ್ಮುಖವಾಗುವುದು ಎಂದು ಮುಖ್ಯಮಂತ್ರಿ ಹೆಚ್.ಡಿ. ಕುಮಾರಸ್ವಾಮಿರವರು ಹೇಳಿದ್ದಾರೆ.

ಇಂದು ಬೆಳಿಗ್ಗೆ ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಕಾರಂಜಾ ನೀರಾವರಿ ಯೋಜನೆಯ ಸಂತ್ರಸ್ಥರ ಸಮಸ್ಯೆಗಳ ಕುರಿತಂತೆ ಚರ್ಚಿಸಲು ಕರೆದಿದ್ದ ಸಭೆಯಲ್ಲಿ ಭೂಮಿ ಕಳೆದುಕೊಂಡ ಸಂತ್ರಸ್ಥರ ಸಮಸ್ಯೆಗಳನ್ನು ಆಲಿಸಿದ ನಂತರ ಮಾತನಾಡಿದ ಕುಮಾರಸ್ವಾಮಿರವರು, ರಾಜ್ಯದಲ್ಲಿ ಉಪ ಚುನಾವಣೆ ಘೋಷಣೆಯಾಗಿದ್ದು, ನೀತಿ ಸಂಹಿತೆ ಜಾರಿಯಲ್ಲಿದೆ. ಚುನಾವಣೆ ಮುಗಿದ ಬಳಿಕ, ನೀರಾವರಿ ಇಲಾಖೆ ಹಾಗೂ ಕಾನೂನು ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಚರ್ಚಿಸಿ ನಿಮ್ಮ ಬೇಡಿಕೆಗಳಿಗೆ ಸೂಕ್ತ ರೀತಿಯಲ್ಲಿ ಕ್ರಮ ಕೈಗೊಳ್ಳಲು ಚಿಂತನೆ ನಡೆಸಲಾಗುವುದು ಎಂದರು.

ಜನಸಾಮಾನ್ಯರ ನೋವನ್ನು ಸರ್ಕಾರ ಅರ್ಥಮಾಡಿಕೊಂಡಿದೆ. ಇನ್ನು 45 ವರ್ಷಗಳಿಂದ ಸಂತ್ರಸ್ಥರಾಗಿರುವ ನಿಮ್ಮ ನೋವು ನಮಗೆ ಅರ್ಥವಾಗಿದೆ. 2015 ರಲ್ಲಿ ಇದ್ದ ಸರ್ಕಾರ ಸಚಿವ ಸಂಪುಟದಲ್ಲಿ ತೆಗೆದುಕೊಂಡ ತೀರ್ಮಾನವನ್ನು ಮರು ಪರಿಶೀಲನೆ ಮಾಡಲಾಗುವುದು. ಉಪ ಚುನಾವಣೆ ನಂತರ ಕಾನೂನಿನ ಚೌಕಟ್ಟಿನಲ್ಲಿ ಪರಿಹಾರ ನೀಡಲು ಸಾಧ್ಯವೇ ಎಂಬ ಚಿಂತನೆಯನ್ನು ಮಾಡಿ, ಅಂತಿಮ ತೀರ್ಮಾನಕ್ಕೆ ಬರಲಾಗುವುದು ಎಂದು ಅಲ್ಲಿ ನೆರೆದಿದ್ದ ಕಾರಂಜಾ ಮುಳಗಡೆ ಸಂತ್ರಸ್ಥರಿಗೆ ಭರವಸೆ ನೀಡಿದರು.

ನಂತರ 60 ದಿನಗಳಿಂದ ಧರಣಿ ನಡೆಸುತ್ತಿರುವ ಹೋರಾಟಗಾರರಿಗೆ ಧರಣಿಯನ್ನು ಕೈಬಿಡುವಂತೆ ಮನವಿ ಮಾಡಿದರು. ಉಪ ಚುನಾವಣೆ ನಂತರ ಸಭೆ ಕರೆಯಲಾಗುವುದು. ಆಗ ಕೆಲ ಮುಖಂಡರನ್ನು ಆಹ್ವಾನಿಸಲಾಗುವುದು. ಸಂಬಂಧಪಟ್ಟ ಅಧಿಕಾರಿಗಳನ್ನು, ಜನಪ್ರತಿನಿಧಿಗಳನ್ನು ಒಳಗೊಂಡ ಸಭೆ ನಡೆಸಿ ಸಾಧಕ–ಭಾದಕಗಳ ಬಗ್ಗೆ ಚರ್ಚಿಸಿ, ಶಾಸ್ವತ ಪರಿಹಾರ ಸೇರಿದಂತೆ ತಮ್ಮ ಹಲವು ಬೇಡಿಕೆಗಳ ಈಡೇರಿಕೆ ಬಗ್ಗೆಯೂ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಕುಮಾರಸ್ವಾಮಿ ತಿಳಿಸಿದರು.

ಬೀದರ್ ಜಿಲ್ಲಾ ಉಸ್ತುವಾರಿ ಸಚಿವರು ಆದ ಸಹಕಾರ ಸಚಿವರಾದ ಶ್ರೀ ಬಂಡೆಪ್ಪ ಖಾಶೆಂಪೂರ ರವರು ಮಾತನಾಡಿ, ರಾಜ್ಯದ ಸಮ್ಮಿಶ್ರ ಸರ್ಕಾರ ಜನ ಸಾಮಾನ್ಯರ ಹಾಗೂ ರೈತರ ಪರವಾಗಿದ್ದು, ಯಾರಿಗೂ ಅನ್ಯಾಯವಾಗಲು ಬಿಡುವುದಿಲ್ಲ ಎಂದರು.

ಕಾರಂಜಾ ಮುಳುಗಡೆ ಸಂತ್ರಸ್ಥರಲ್ಲಿ ಕೆಲವರು ನ್ಯಾಯಾಲಯದ ಮೆಟ್ಟಲೇರಿ ಪರಿಹಾರ ಹೆಚ್ಚಿಸಿಕೊಂಡರು. ಆದರೆ, ಶೇಕಡಾ 80 ರಷ್ಟು ಸಂತ್ರಸ್ಥರು ನ್ಯಾಯಾಲಯಕ್ಕೆ ಹೋಗಲೇ ಇಲ್ಲ, ಜೊತೆಗೆ ಫಾರಂ 28 ಎ ಅಡಿಯಲ್ಲಿ ಹೆಚ್ಚಿನ ಪರಿಹಾರ ಕೋರಿ ಅರ್ಜಿ ಸಲ್ಲಿಸಲೇ ಇಲ್ಲ. ನ್ಯಾಯಾಲಯ ಇದು ಮರುಪರಿಶೀಲನಾ ಅರ್ಜಿಗೆ ಯೋಗ್ಯವಲ್ಲದ ದಾವೆ ಎಂದು ಹೇಳಿದ್ದರು, ರಾಜ್ಯ ಸರ್ಕಾರ ಮುಳುಗಡೆ ಸಂತ್ರಸ್ಥರಿಗಾಗಿ ವಿಶೇಷ ಪ್ಯಾಕೇಜನ್ನು ಕಾನೂನಿನ ಚೌಕಟ್ಟಿನಲ್ಲಿ ಘೋಷಿಸಲು ಸಾಧ್ಯವೇ ಎಂಬುದನ್ನು ಸಹ ಪರಿಶೀಲಸಲಾಗುವುದು ಎಂದರು.

ಬೀದರ್ ಜಿಲ್ಲಾ ಉಸ್ತುವಾರಿ ಸಚಿವನಾಗಿ ನಾನು ಕಾರಂಜಾ ಮುಳುಗಡೆ ಸಂತ್ರಸ್ಥರ ಪರವಾಗಿದ್ದು, ಅವರಿಗೆ ಶಾಶ್ವತ ಪರಿಹಾರ ಕೊಡಿಸಲು ಸಿದ್ದನಿದ್ದೇನೆ ಎಂದು ಹೇಳಿದರು.

ಯೋಜನೆಗಾಗಿ ಮನೆ ಮತ್ತು ಭೂಮಿ ಕಳೆದುಕೊಂಡ ಸಂತ್ರಸ್ಥರಿಗಾಗಿ ಈಗಾಗಲೇ 8 ಸಾವಿರ ಮನೆಗಳನ್ನು ಪುನರ್ವಸತಿ ಯೋಜನೆಯಡಿಯಲ್ಲಿ ಕಟ್ಟಿಸಿಕೊಡಲಾಗಿದೆ. ಅಲ್ಲಿ ಕೆಲ ಮೂಲಭೂತ ಸೌಕರ್ಯಗಳ ಕೊರತೆ ಇದ್ದು ಅದನ್ನು ಕಲ್ಪಿಸಲು ಜಿಲ್ಲಾಡಳಿತ ಹಾಗೂ ಸರ್ಕಾರ ಸಿದ್ದವಿದೆ ಎಂದು ಬಂಡೆಪ್ಪ ಖಾಶೆಂಪೂರ ರವರು ತಿಳಿಸಿದರು.

ಜಲಸಂಪನ್ಮೂಲ ಸಚಿವರಾದ ಡಿ.ಕೆ. ಶಿವಕುಮಾರ್ ರವರು ಮಾತನಾಡಿ, ಸರ್ಕಾರದ ಆರ್ಥಿಕ ಪರಿಸ್ಥಿತಿಯನ್ನು ನೋಡಿಕೊಂಡು ಜೊತೆಗೆ ಸಂತ್ರಸ್ಥರಿಗೆ ಆದ ಅನ್ಯಾಯವನ್ನು ಮಾನವೀಯತೆ ದೃಷ್ಠಿಯಿಂದ ಪರಿಗಣಿಸಿ, ಶಾಶ್ವತ ಪರಿಹಾರ ನೀಡಲಾಗುವುದು ಎಂದರು.

ಅಲ್ಲದೇ, ನಿರಾಶ್ರಿತರಿಗೆ ಪ್ರಮಾಣ ಪತ್ರ ಹಾಗೂ ಸವಲತ್ತುಗಳನ್ನು ಕಲ್ಪಿಸುವ ಭರವಸೆಯನ್ನು ನೀಡಿದರು. 1971 ರಲ್ಲಿ ಪ್ರಾರಂಭವಾದ ಕಾರಂಜಾ ಯೋಜನೆ ಇದಾಗಿದ್ದು, ಅಂದು ಭೂಮಿ ಕಳೆದುಕೊಂಡ ರೈತರಿಗೆ ಸರ್ಕಾರ ಎಕರೆಗೆ ಮೂರು ಸಾವರದಂತೆ ಪರಿಹಾರ ನೀಡಿತ್ತು. ಇದನ್ನು ಪ್ರಶ್ನಿಸಿ ನ್ಯಾಯಾಲಯದ ಮೆಟ್ಟಿಲು ಏರಿದವರಿಗೆ ಒಂದು ಎಕರೆಗೆ 78 ಸಾವಿರ ಹಾಗೂ ಬಡ್ಡಿ ನೀಡಬೇಕು ಎಂದು ಕೋರ್ಟ್ ಆದೇಶಿಸಿತ್ತು. ಈಗ ಪರಿಹಾರ ಮೊತ್ತವನ್ನು ಹೆಚ್ಚಿಸಲು ಸಾಧ್ಯವಿದೆಯೇ ಎಂಬುದನ್ನು ನೀರಾವರಿ ಹಾಗೂ ಕಾನೂನು ಇಲಾಖೆ ಅಧಿಕಾರಿಗಳೊಂದಿಗೆ ಚರ್ಚಿಸಿ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಹೇಳಿದರು.

ಗಣಿ, ಭೂ ವಿಜ್ಞಾನ ಹಾಗೂ ಮುಜರಾಯಿ ಸಚಿವರಾದ ಶ್ರೀ ರಾಜಶೇಖರ್ ಬಿ. ಪಾಟೀಲ್ ರವರು ಮಾತನಾಡಿ ಸಂತ್ರಸ್ಥ ಕುಟುಂಬಗಳಿಗೆ ಶಾಶ್ವತ ಪರಿಹಾರ ಒದಗಿಸುವ ನಿಟ್ಟಿನಲ್ಲಿ ರಾಜ್ಯ ಸಮ್ಮಿಶ್ರ ಸರ್ಕಾರ ಶ್ರಮಿಸಲಿದೆ. ಹೀಗಾಗಿ ಯಾರು ಆತಂಕ ಪಡುವ ಅಗತ್ಯವಿಲ್ಲ ಎಂದು ಹೇಳಿದರು.

ಸಂತ್ರಸ್ಥರ ಮಕ್ಕಳಿಗೆ, ಮೊಮ್ಮಕ್ಕಳಿಗೂ ಸವಲತ್ತು ಸಿಗಬೇಕು. ಇದಕ್ಕಾಗಿ ರಾಜ್ಯ ಸರ್ಕಾರ ಹೈದ್ರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ, ಸಂವಿಧಾನ ಪರಿಚ್ಛೇಧ 371ಜೆ ಅಡಿಯಲ್ಲಿ ಅವರ ವಿದ್ಯಾಭ್ಯಾಸ, ಸರ್ಕಾರಿ ಕೆಲಸ ನೀಡಲು ಅವಕಾಶವಿದೆಯೇ ಎಂಬ ಬಗ್ಗೆಯೂ ಚಿಂತನೆ ನಡೆಸಲಾಗುವುದು ಎಂದರು.

ಕೆ.ಪಿ.ಸಿ.ಸಿ. ಕಾರ್ಯಾಧ್ಯಕರು ಹಾಗೂ ಭಾಲ್ಕಿ ಶಾಸಕರಾದ ಈಶ್ವರ ಖಂಡ್ರೆ ಮಾತನಾಡಿ, ಹಿಂದೆ ಇದ್ದ ಅಧಿಕಾರಿಗಳ ತಪ್ಪಿನಿಂದಾಗಿ ಭೂಮಿ ಕಳೆದುಕೊಂಡ ಸಂತ್ರಸ್ಥರ ಜಮೀನಿನ ಮೌಲ್ಯಮಾಪನವನ್ನು ವೈಜ್ಞಾನಿಕವಾಗಿ ಮಾಡದ ಪರಿಣಾಮ ಅವರಿಗೆ ಪರಿಹಾರ ನೀಡುವಲ್ಲಿಯೂ ಅನ್ಯಾಯವಾಗಿದೆ. ಈ ಅನ್ಯಾಯವನ್ನು ಸರಿಪಡಿಸಲು ರಾಜ್ಯ ಸಮ್ಮಿಶ್ರ ಸರ್ಕಾರ ಸಿದ್ದವಿದ್ದು, ಯಾವುದೇ ಸಂತ್ರಸ್ಥರಿಗೆ ಅನ್ಯಾಯವಾಗಲು ಬಿಡುವುದಿಲ್ಲ. ಕಾನೂನಿನ ಚೌಕಟ್ಟಿನಲ್ಲಿ ಸಂತ್ರಸ್ಥರಿಗೆ ನ್ಯಾಯಯುತವಾಗಿ ಹಾಗೂ ವೈಜ್ಞಾನಿಕವಾಗಿ ಪರಿಹಾರ ಸಿಗವಂತೆ ಮಾಡಲಾಗುವುದು ಎಂದು ತಿಳಿಸಿದರು.

ಕಾರಂಜಾ ಯೋಜನೆಯಲ್ಲಿ ಮುಳುಗಡೆ ಸಂತ್ರಸ್ಥರು ರಾಜ್ಯದಲ್ಲಿ ಇನ್ನಿತರ ಯೋಜನೆಗಳಲ್ಲಿ ಅಲ್ಲಿನ ರೈತರು ಪಡೆದಿರುವ ಸವಲತ್ತುಗಳನ್ನು ಇಲ್ಲಿನ ರೈತರು ಪಡೆದಿಲ್ಲ. ಕಾನೂನಿನ ಪ್ರಕಾರ ದೊರೆತ ಸರ್ಕಾರಿ ಉದ್ಯೋಗ, ಬದಲಿ ಜಮೀನು ನೀಡಿಕೆ ಸೇರಿದಂತೆ ಹಲವಾರು ಸರ್ಕಾರಿ ಸವಲತ್ತುಗಳಿಂದ ಸಂಪೂರ್ಣವಾಗಿ ವಂಚಿತರಾಗಿದ್ದಾರೆ ಎಂದು ಹಲವು ಹೋರಾಟಗಾರರು ಇದೇ ಸಂದರ್ಭದಲ್ಲಿ ಬೆಳಕು ಚೆಲ್ಲಿದರು. ಶಾಶ್ವತ ಪರಿಹಾರ ನೀಡಬೇಕು ಎಂದು ಕೆಲ ಸಂತ್ರಸ್ಥರು ಸರ್ಕಾರವನ್ನು ಒತ್ತಾಯಿಸಿದರು.

ಬೀದರ್ ಸಂಸದರಾದ ಭಗವಂತ ಖೂಬಾ, ವಿಧಾನ ಪರಿಷತ್ ಸದಸ್ಯರಾದ ರಘುನಾಥರಾವ್ ಮಲ್ಕಾಪೂರೆ, ವಿಜಯಸಿಂಗ್, ವಿಧಾನಸಭಾ ಸದಸ್ಯರಾದ ರಹೀಮ್ ಖಾನ್, ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಜಲಸಂಪನ್ಮೂಲ ಇಲಾಖೆ ಪ್ರಧಾನ ಕಾರ್ಯದರ್ಶಿ ರಾಕೇಶ್ ಸಿಂಗ್, ಬೀದರ್ ಜಿಲ್ಲಾಧಿಕಾರಿ ಮಹೇಶ್, ಕಾರಂಜಾ ಮುಳಗುಡೆ ಸಂತ್ರಸ್ಥರ ಹಿತರಕ್ಷಣಾ ಸಮಿತಿ ಅಧ್ಯಕ್ಷರಾದ ಚಂದ್ರಶೇಖರ್ ಪಾಟೀಲ್

**ಹೊಚ್ಚಕನಹಳ್ಳಿ, ಕಾರಂಜಾ ಮುಳುಗಡೆ ಸಂತ್ರಸ್ಥರ ಹೋರಾಟ ಸಮಿತಿ ಅಧ್ಯಕ್ಷರಾದ ಸೂರ್ಯಕಾಂತ್ ಪಾಟೀಲ್ ಡಾಕುಳಿಗಿ ಸೇರಿದಂತೆ 50 ಕ್ಕೂ ಹೆಚ್ಚು ಮಂಡಿ ಸಂತ್ರಸ್ಥರು ಉಪಸ್ಥಿತರಿದ್ದರು.**

**ಸಂಖ್ಯೆ:1160/1260**

## ಎಸಿಬಿ ದಾಳಿ

**ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)**

ಗದಗ ಜಿಲ್ಲೆಯ ಕುರ್ತಕೋಟಿ ಗ್ರಾಮದ ಫಿರ್ಯಾದುದಾರರು ರೂ.1,75,000/-ಗಳ ಸಬ್ಸಿಡಿ ಕೋರಿ ಸಲ್ಲಿಸಿರುವ ಅರ್ಜಿಯನ್ನು ಅಂಗೀಕರಿಸಲು ಗದಗ ಜಿಲ್ಲೆಯ ಖಾದಿ ಮತ್ತು ಗ್ರಾಮದ್ಯೋಗದ ಅಧಿಕಾರಿಯವರಿಗೆ ಅರ್ಜಿ ಸಲ್ಲಿಸಿರುತ್ತಾರೆ. ಶ್ರೀ ನರಿಯಪ್ಪಾ, ಗದಗ ಜಿಲ್ಲಾ ಖಾದಿ ಮತ್ತು ಗ್ರಾಮದ್ಯೋಗ ಅಧಿಕಾರಿ, ಗದಗ ಜಿಲ್ಲೆ ರವರು ಸದರಿ ಅರ್ಜಿಯನ್ನು ಅಂಗೀಕರಿಸಲು ಫಿರ್ಯಾದಿದಾರರಿಂದ ರೂ.10000/- ಗಳ ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ : 15.10.2018 ರಂದು ಶ್ರೀ ನರಿಯಪ್ಪಾ ರವರು ಲಂಚದ ಹಣ ರೂ. 10,000/- ಗಳನ್ನು ಫಿರ್ಯಾದಿಯಿಂದ ಪಡೆದುಕೊಳ್ಳುವ ಸಂದರ್ಭದಲ್ಲಿ ಗದಗ ಜಿಲ್ಲೆಯ ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳು ನಡೆಸಿದ ಕಾರ್ಯಾಚರಣೆಯಲ್ಲಿ ಸಿಕ್ಕಿ ಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ:1161/1261**

## ACB Raid

Bengaluru, October 15, 2018(Karnataka Information)

Sri. Nariyappa S/o Gurusomappa Hunagund, District Officer, Khadi and Village Industry, Board Gadag had demanded bribe of Rs. 10,000/- from the complainant to approve the subsidy application of Rs.1,75,000/-

On 15.10.2018 the Officials of Gadag, Anti Corruption Bureau PS trapped and arrested Sri. Sri Nariyappa while receiving bribe amount of Rs. 10,000/-from the complainant. The bribe amount has been seized. The Investigation is continued says official press release.

**ಸಂಖ್ಯೆ:1162/1262**

## ಎಸಿಬಿ ದಾಳಿ

**ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)**

ತುಮಕೂರು ಜಿಲ್ಲೆ ಶಿರಾ ತಾಲ್ಲೂಕು, ಗೋವಿಂದನಹಳ್ಳಿ ಗ್ರಾಮದ ನಿವಾಸಿಯಾಗಿರುವ ಫಿರ್ಯಾದುದಾರರು ಬಿದನಕೆರೆ ವೃತ್ತದ ಗ್ರಾಮಲೆಕ್ಕಾಧಿಕಾರಿಗಳ ಕಛೇರಿಗೆ ತಮ್ಮ ಜಮೀನಿಗೆ ಸಂಬಂಧಪಟ್ಟಂತೆ ಆರ್‌ಟಿಸಿ ತಿದ್ದುಪಡಿ ಮಾಡಿಕೊಡಲು ಅರ್ಜಿಯನ್ನು ಸಲ್ಲಿಸಿರುತ್ತಾರೆ. ಶ್ರೀ.ಶಿವಪ್ರಕಾಶ್, ಗ್ರಾಮಲೆಕ್ಕಾಧಿಕಾರಿ ಬಿದನಕೆರೆ ವೃತ್ತ, ಶಿರಾ ತಾಲ್ಲೂಕು ರವರು ಆರ್‌ಟಿಸಿ ತಿದ್ದುಪಡಿ ಮಾಡಿಕೊಡಲು ರೂ.10,000/- ಲಂಚದ ಹಣಕ್ಕೆ ಬೇಡಿಕೆ ಇಟ್ಟಿರುತ್ತಾರೆ.

ದಿನಾಂಕ:15/10/2018 ರಂದು ಶ್ರೀ.ಶಿವಪ್ರಕಾಶ್ ರವರು ರೂ.4,000/- ಲಂಚದ ಹಣವನ್ನು ಫಿರ್ಯಾದುದಾರರಿಂದ ಸ್ವೀಕರಿಸುತ್ತಿದ್ದ ಸಂದರ್ಭದಲ್ಲಿ ತುಮಕೂರು ಭ್ರಷ್ಟಾಚಾರ ನಿಗ್ರಹ ದಳದ ಅಧಿಕಾರಿಗಳಿಗೆ ಸಿಕ್ಕಿಬಿದ್ದಿರುತ್ತಾರೆ. ಇವರನ್ನು ದಸ್ತಗಿರಿ ಮಾಡಿ ಲಂಚದ ಹಣವನ್ನು ವಶಪಡಿಸಿಕೊಳ್ಳಲಾಗಿದೆ. ತನಿಖೆ ಮುಂದುವರೆದಿದೆ ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ:1164/1264**

# ACB Raid

Bengaluru, October 15, 2018(Karnataka Information)

A resident of Govindanahalli Village, Sira Taluq, Tumakuru Dist had applied for RTC Correction with Village Accountant, Bidanakere Circle, Sira taluk, Sri. Shivaprakash, Village Accountant demanded Rs. 10000/- bribe amount to do the same.

On 15.10.2018 the officials of Tumakuru, Anti Corruption Bureau PS trapped and arrested Sri. Shivaprakash while accepting bribe amount of Rs.4,000/- from the complainant. The bribe amount has been seized. The Case is under Investigation says official press release.

**ಸಂಖ್ಯೆ:1165/1265**

# ಪ್ರೋತ್ಸಾಹ ಧನಸಹಾಯಕ್ಕಾಗಿ ಆನ್‌ಲೈನ್ ಅರ್ಜಿ ಅವಧಿ ವಿಸ್ತರಣೆ

**ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)**

**ಕನ್ನಡ ಮತ್ತು ಸಂಸ್ಕೃತಿ ಇಲಾಖೆ 2018–19 ನೇ ಸಾಲಿನಲ್ಲಿ ಕನ್ನಡ ಭಾಷೆ, ಸಾಹಿತ್ಯ, ಸಂಗೀತ. ನೃತ್ಯ, ಜಾನಪದ, ನಾಟಕ, ಯಕ್ಷಗಾನ, ಚಿತ್ರಕಲೆ ಹಾಗೂ ಶಿಲ್ಪಕಲೆ ಸೇರಿದಂತೆ ಇತರೆ ಸೃಜನಶೀಲ ಕಲಾ ಪ್ರಕಾರಗಳಲ್ಲಿ ನಿರಂತರವಾಗಿ ಸಾಂಸ್ಕೃತಿಕ ಚಟುವಟಿಕೆಗಳನ್ನು ನಡೆಸುತ್ತಿರುವ ಸಂಘ ಸಂಸ್ಥೆಗಳಿಗೆ ಪ್ರೋತ್ಸಾಹಧನ ಸಹಾಯ ಮತ್ತು ಅಸಂಘಟಿತ ಕಲಾವಿದರಿಗೆ ವಾದ್ಯ ಪರಿಕರ ಮತ್ತು ವೇಷ ಭೂಷಣ ಖರೀದಿಗೆ ಧನ ಸಹಾಯ, ಶಿಲ್ಪ/ಶಿಲ್ಪಕಲಾಕೃತಿಗಳ ಪ್ರದರ್ಶನಕ್ಕೆ ಧನ ಸಹಾಯಕ್ಕಾಗಿ ಅರ್ಹ ಸಂಸ್ಥೆಗಳು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಅಕ್ಟೋಬರ್ 20 ರವರೆಗೆ ಅವಧಿ ವಿಸ್ತರಿಸಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.**

ಸಂಖ್ಯೆ:1166/1266

# ಸಚಿವರ ಪ್ರವಾಸ

**ಬೆಂಗಳೂರು, ಅಕ್ಟೋಬರ್ 15, (ಕರ್ನಾಟಕ ವಾರ್ತೆ)**

**ಕಂದಾಯ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವ ಆರ್.ವಿ. ದೇಶಪಾಂಡೆ ಅವರು ಅಕ್ಟೋಬರ್ 21 ರವರೆಗೆ ಧಾರವಾಡ, ಉತ್ತರ ಕನ್ನಡ ಹಾಗೂ ಬೆಳಗಾವಿ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳುವರು.**